## ಸುದ್ದಿ ತುಣುಕು

ಸರ್ಕಾರ ಸಿದ್ಧಪಡಿಸಿದ ಭಾಷಣದಲ್ಲಿ ಕೆಲ ಅಂಶಗಳನ್ನು ಕೈಬಿಡಬೇಕೆಂಬ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಆಕ್ಷೇಪಕ್ಕೆ ಸರ್ಕಾರ ವಿರೋಧ ವ್ಯಕ್ತಪಡಿಸಿದೆ.

ಚಿನ್ನಸ್ವಾಮಿ ಮೈದಾನದಲ್ಲಿ ಐಪಿಎಲ್ ಪಂದ್ಯಗಳ ಆಯೋಜನೆಗೆ ಸರ್ಕಾರದಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆಯಾದರೂ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ನಿರ್ಧಾರದ ಮೇಲೆ ಆಯೋಜನೆ ಅವಲಂಬಿತವಾಗಿದೆ.

ಭಾರತ-ಇಯು ಮುಕ್ತ ವ್ಯಾಪಾರ ಒಪ್ಪಂದವನ್ನು 'ಮದರ್ ಆಫ್ ಆಲ್ ಡೀಲ್ಸ್' ಎಂದ ಯುರೋಪಿಯನ್ ಕಮಿಷನ್ ಅಧ್ಯಕ್ಷೆ

ಛತ್ತೀಸ್‌ಗಢದ ಬಿಜಾಪುರದಲ್ಲಿ ಮಾಜಿ ಸರಪಂಚ್ ಒಬ್ಬರನ್ನು ನಕ್ಸಲರು ಕೊಂದಿದ್ದಾರೆ. ಮೂರು ದಿನದಲ್ಲಿ ನಡೆದ ಎರಡನೇ ದಾಳಿ ಇದಾಗಿದ್ದು, ಸ್ಥಳೀಯರಲ್ಲಿ ಭದ್ರತೆ ಬಗ್ಗೆ ಆತಂಕ ಹೆಚ್ಚಾಗಿದೆ.

ಈ ವರ್ಷ ಐಐಟಿ ಖರಗ್‌ಪುರದ ಕ್ಯಾಂಪಸ್ ಸಂದರ್ಶನದಲ್ಲಿ ವಿದ್ಯಾರ್ಥಿಯೊಬ್ಬ ವರ್ಷಕ್ಕೆ 2.44 ಕೋಟಿ ರೂ.ಗಳ ಸಂಬಳದ ಕೆಲಸ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾನೆ

ಅಬಕಾರಿ ಸಚಿವರನ್ನು ವಜಾ ಮಾಡದೇ ಇಟ್ಟುಕೊಂಡಿದ್ದನ್ನು ನೋಡಿದಾಗ ಮಾನ್ಯ ಮುಖ್ಯಮಂತ್ರಿಗಳ ಕೃಪಾಕಟಾಕ್ಷದಲ್ಲೇ ಅಬಕಾರಿ ಸಚಿವರೂ ಭ್ರಷ್ಟಾಚಾರ ನಡೆಸುತ್ತಿರುವುದು ಸ್ಪಷ್ಟವಾಗುತ್ತದೆ ಎಂದು ಸಿ.ಟಿ. ರವಿ ಅವರು ಆರೋಪಿಸಿದ್ದಾರೆ.

ಭಾರತದ ಸ್ಟಾರ್ ಶಟ್ಲರ್ ಮತ್ತು ಒಲಿಂಪಿಕ್ ಪದಕ ವಿಜೇತೆ ಸೈನಾ ನೆಹ್ವಾಲ್ ತಮ್ಮ ನಿವೃತ್ತಿ ವಿಚಾರವನ್ನು ಖಚಿತಪಡಿಸಿದ್ದಾರೆ.

ಗ್ರೀನ್‌ಲ್ಯಾಂಡ್‌ಗೆ ಆಗಮಿಸುವ ವಿಮಾನಗಳು ಯುನೈಟೆಡ್ ಸ್ಟೇಟ್ಸ್ ಮತ್ತು ಕೆನಡಾ ಭೂಖಂಡದ ನೆಲೆಗಳಿಂದ ಬರುವ ವಿಮಾನಗಳ ಜೊತೆ ಕಾರ್ಯನಿರ್ವಹಿಸುತ್ತವೆ ಎಂದು ಉತ್ತರ ಅಮೆರಿಕದ ಏರೋಸ್ಪೇಸ್ ಡಿಫೆನ್ಸ್ ಕಮಾಂಡ್ ಹೇಳಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಸುಪ್ರೀಂ ಕೋರ್ಟ್‌ನ ಸೂಚನೆಗಳನ್ನು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸಿಎಂ ಮಮತಾ ಬ್ಯಾನರ್ಜಿ ತಾಕೀತು ಮಾಡಿದ್ದಾರೆ.

ಶಬರಿಮಲೆ ದೇಗುಲದ ಗರ್ಭಗುಡಿಯ ಚಿನ್ನ ಕಳವು ಪ್ರಕರಣದ ಪ್ರಮುಖ ಆರೋಪಿ ಉನ್ನಿಕೃಷ್ಣ ಪೊಟ್ಟಿಗೆ ಜಾಮೀನು ಸಿಕ್ಕಿದೆ. ಆದರೆ, ದೇಗುಲದ ದ್ವಾರಪಾಲಕ ಮೂರ್ತಿಯ ಚಿನ್ನದ ಕಳವು ಪ್ರಕರಣದಿಂದಾಗಿ ಅವರು ಜೈಲಿನಲ್ಲೇ ಇರಬೇಕಿದೆ.

ಲಕ್ಕುಂಡಿಯಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯದ ವೇಳೆ ಹಸಿರು ಶಿಲೆಯಲ್ಲಿ ಕೆತ್ತಲಾದ ನಾಗದೇವತೆಯ ಶಿಲ್ಪ ಪತ್ತೆಯಾಗಿದೆ. ಶಿಲ್ಪ ಪತ್ತೆ ನಿಧಿ ಇರುವಿಕೆಯ ಸಂಕೇತ ಎಂದು ಕೆಲ ಗ್ರಾಮಸ್ಥರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ವಿಬಿ ಜಿ ರಾಮ್ ಜಿ ಯೋಜನೆ ವಿಚಾರದಲ್ಲಿ ವಿಶೇಷ ಅಧಿವೇಶನ ನಡೆಸುವ ಉದ್ದೇಶ ಅನಗತ್ಯ. ರಾಜ್ಯಪಾಲರು ಸರ್ಕಾರದ ಕಿವಿ ಹಿಂಡಬೇಕು ಎಂದು ವಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ.

ಇಂಡಿಯನ್ ಪ್ರೀಮಿಯರ್ ಲೀಗ್ ಜೊತೆ ಗೂಗಲ್ ಜೆಮಿನಿ ಕೃತಕ ಬುದ್ಧಿಮತ್ತೆ ಪ್ರಾಯೋಜಕತ್ವದ ಒಪ್ಪಂದಕ್ಕೆ ಸಹಿಹಾಕಿದೆ.

ರಾಜ್ಯಪಾಲರು ಅವರೇ ಸಿದ್ಧಪಡಿಸಿದ ಭಾಷಣದ ಒಂದು ಪ್ಯಾರಾ ಓದಿ ಸಂವಿಧಾನ ಉಲ್ಲಂಘಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು.

ರಾಜ್ಯ ಸರ್ಕಾರ ಸಿದ್ಧಪಡಿಸಿರುವ ಭಾಷಣ ಓದಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಿರಾಕರಿಸಿದರು. ಕೇವಲ ಎರಡು ಸಾಲುಗಳನ್ನು ಮಾತ್ರ ಓದಿ ಭಾಷಣ ಮುಗಿಸಿದರು.

## ಚಿಕನ್ ಸುಕ್ಕ



**ಬೇಕಾಗುವ ಸಾಮಾಗ್ರಿಗಳು :**
1 ಕೆಜಿ ಚಿಕನ್, 2 ಚಮಚ ದನಿಯಾ, 1/2 ಚಮಚ ಮೆಂತೆ, ಚಿಟಿಕೆಯಷ್ಟು ಅರಿಶಿಣ ಪುಡಿ, 1 ಚಮಚ ಕರಿಮೆಣಸು, 1 ಚಮಚ ಜೀರಿಗೆ, 1 ಚಮಚ ಗಸಗಸೆ, 5 ಬೆಳ್ಳುಳ್ಳಿ ಎಸಳು, ಹುರಿದ ಬ್ಯಾಡಗಿ ಮೆಣಸಿನ ಕಾಯಿ–10, ತುರಿದ ತೆಂಗಿನ ಕಾಯಿ ಒಂದು ಕಪ್, ಸ್ವಲ್ಪ ಕರಿ ಬೇವಿನ ಎಲೆ, ಈರುಳ್ಳಿ 2, ತುಪ್ಪ 2 ಚಮಚ, ಉಪ್ಪು ರುಚಿಗೆ ತಕ್ಕಷ್ಟು.

**ಮಾಡುವ ವಿಧಾನ :**
ಮೊದಲಿಗೆ ಬಾಣಲೆಯಲ್ಲಿ ತುಪ್ಪ ಹಾಕಿ ಬಿಸಿ ಮಾಡಿ ಅದರಲ್ಲಿ ಕರಿಮೆಣಸು, ಮೆಂತೆ, ಕೊತ್ತಂಬರಿ ಬೀಜ, ಗಸಗಸೆ, ಜೀರಿಗೆ ಹಾಕಿ ಹುರಿದು ತಣ್ಣಗಾದ ನಂತರ ಮೆಣಸಿನ ಕಾಯಿ ಮತ್ತು ಅರಿಶಿಣ ಹಾಕಿ ಪುಡಿ ಮಾಡಬೇಕು. ನಂತರ ಈ ಪುಡಿಯನ್ನು ಚಿಕನ್ ಜೊತೆ ಮಿಶ್ರ ಮಾಡಿ ನಂತರ ತಕ್ಕ ಉಪ್ಪು ಹಾಕಿ ಕಡಿಮೆ ಉರಿಯಲ್ಲಿ 4 ರಿಂದ 5 ನಿಮಿಷ ಬೇಯಿಸಿ ನಂತರ ತೆಂಗಿನ ಕಾಯಿ ತುರಿ ಹಾಕಿ, ಪಾತ್ರೆಯ ಬಾಯಿ ಮುಚ್ಚಿ ಮತ್ತೆ 4–5 ನಿಮಿಷ ಚಿಕನ್ನನ್ನು ಬೇಯಿಸಬೇಕು. ಈಗ ಬಾಣಲೆಯನ್ನು ಬಿಸಿ ಮಾಡಿ ಅದಕ್ಕೆ ತುಪ್ಪ ಹಾಕಿ ಅದರಲ್ಲಿ ಕರಿಬೇವಿನ ಎಲೆ ಮತ್ತು ಕತ್ತರಿಸಿದ ಈರುಳ್ಳಿ ಹಾಕಿ, ಈರುಳ್ಳಿ ಕಂದು ಬಣ್ಣಕ್ಕೆ ಬರುವವರೆಗೆ ಹುರಿದು ಅದನ್ನು ತಯಾರಾದ ಚಿಕನ್ ಜೊತೆ ಹಾಕಿ ಮಿಶ್ರ ಮಾಡಿದರೆ ರುಚಿಕರವಾದ ಚಿಕನ್ ಸುಕ್ಕ ಸವಿಯಲು ಸಿದ್ದ.

## ರಷ್ಯಾದಲ್ಲಿ ಕಟ್ಟಡವೇ ಕಾಣದಷ್ಟು ಹಿಮಪಾತ



ಮಾಸ್ಕೋ : ರಷ್ಯಾದ ಕಾಮ್ಚಾಟ್ಕಾಪರ್ಯಾಯ ದ್ವೀಪದಲ್ಲಿ ಕಟ್ಟಡವೇ ಕಾಣದಷ್ಟು ಎತ್ತರಕ್ಕೆ ಹಿಮ ಬೀಳುತ್ತಿದೆ. ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ. ರಸ್ತೆ, ಮನೆಗಳು ಮತ್ತು ವಾಹನಗಳು ದಟ್ಟ ಹಿಮಪಾತದಿಂದ ಮುಚ್ಚಿ ಹೋಗಿವೆ. ರಸ್ತೆಗಳು, ಮನೆಗಳು ಮತ್ತು ವಾಹನಗಳು ಕಾಣದಷ್ಟು ಎತ್ತರ ಹಿಮ ಬಿದ್ದಿದೆ. ಈ ಪ್ರದೇಶದಲ್ಲಿ ಸಾಮಾನ್ಯವಾಗಿ ಹಿಮಪಾತವಾಗುತ್ತಿದರೂ, ಈ ಬಾರಿ ಹಿಮದ ಪ್ರಮಾಣ ಅಪರೂಪದ ಮಟ್ಟದಲ್ಲಿದೆ.

## ಅಮೆರಿಕಕ್ಕೆ ಖಡಕ್ ಸಂದೇಶ !



ಗ್ರೀನ್‌ಲ್ಯಾಂಡ್ : ಗ್ರೀನ್‌ಲ್ಯಾಂಡ್ ಅನ್ನು ಖರೀದಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ರ ಹಠ ಮತ್ತು ಬೆದರಿಕೆಗಳ ನಡುವೆಯೇ, ಯುರೋಪ್‌ನ ಪ್ರಮುಖ ರಾಷ್ಟಗಳು ಈ ದ್ವೀಪ ಪ್ರದೇಶಕ್ಕೆ ತಮ್ಮ ಸೈನಿಕರನ್ನು ಕಳುಹಿಸುವ ಮೂಲಕ ಅಮೆರಿಕಕ್ಕೆ ಖಡಕ್ ಸಂದೇಶ ರವಾನಿಸಿವೆ. ವರದಿಗಳ ಪ್ರಕಾರ, ಫ್ರಾನ್ಸ್ 15, ಸ್ವೀಡನ್ 3 ಮತ್ತು ಬ್ರಿಟನ್ 1 ಸೇನಾ ಅಧಿಕಾರಿಯನ್ನು ಗ್ರೀನ್‌ಲ್ಯಾಂಡ್‌ನ ರಕ್ಷಣಾ ತರಬೇತಿಗಾಗಿ ನಿಯೋಜಿಸಿವೆ.

## ಟ್ರಂಪ್‌ಗೆ ನೀಡಿದ ಮಾರಿಯಾ ಕೊರಿನಾ ಮಚಾಡೊ



ವಾಷಿಂಗ್ಟನ್ : ಕೊನೆಗೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ನೊಬೆಲ್ ಶಾಂತಿ ಪುರಸ್ಕಾರ ಸಿಕ್ಕಿಬಿಟ್ಟಿದೆ. ವೆನೆಜುವೆಲಾದ ವಿರೋಧ ಪಕ್ಷದ ನಾಯಕಿ ಮಾರಿಯಾ ಕೊರಿನಾ ಮಚಾದೊ ಅವರು ತಮ್ಮ ನೊಬೆಲ್ ಶಾಂತಿ ಪುರಸ್ಕಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಗೌರವ ಸೂಚಕವಾಗಿ ಪ್ರದಾನ ಮಾಡಿದ್ದಾರೆ. ಮಚಾದೊ ಅವರು ಟ್ರಂಪ್ ಅವರನ್ನು ಶ್ವೇತಭವನದಲ್ಲಿ ಭೇಟಿಯಾದರು. ವೆನೆಜುವೆಲಾದ ಸ್ವಾತಂತ್ರ್ಯಕ್ಕೆ ಅವರ ವಿಶೇಷ ಕೊಡುಗೆಗಾಗಿ ಪುರಸ್ಕಾರವನ್ನು ಅವರಿಗೆ ಅರ್ಪಿಸಿದ್ದೇನೆ ಎಂದು ಹೇಳಿದ್ದಾರೆ.

## ಭಾರತ ಚಂದ್ರನ ಅಂಗಳಕ್ಕೆ ತಲುಪಿದೆ – ಅಮೆರಿಕ ಸಂಸದ



ಅಮೇರಿಕಾ : 2023ರಲ್ಲಿ ಮೊದಲ ಬಾರಿ ಚಂದ್ರನ ದಕ್ಷಿಣ ಧ್ರುವ ತಲುಪಿದ ಭಾರತದ ಚಂದ್ರಯಾನ–3ರ ಬಗ್ಗೆ ಅಮೆರಿಕ ಸಂಸದ ರಿಚ್ ಮೆಕ್‌ಕಾರ್ಮಿಕ್ ಮೆಚ್ಚುಗೆ ವ್ಯಕ್ತಪಡಿಸಿದ್ದು, 'ಅಮೆರಿಕಕ್ಕೆ ಒಂದು ಕಟ್ಟಡ ಕಟ್ಟಲೂ ಕಡಿಮೆ ಬೀಳುವ ಹಣದಲ್ಲಿ ಭಾರತ ಚಂದ್ರನ ಅಂಗಳಕ್ಕೆ ತಲುಪಿದೆ' ಎಂದು ಹೇಳಿದ್ದಾರೆ. '726 ಕೋಟಿ ರು.(80 ಮಿಲಿಯನ್ ಡಾಲರ್) ಖರ್ಚಿನಲ್ಲಿ ಭಾರತವು ತನ್ನ ಬಾಹ್ಯಾಕಾಶ ನೌಕೆಯನ್ನು ಚಂದ್ರನ ದಕ್ಷಿಣ ಧ್ರುವದಲ್ಲಿ ಇಳಿಸಿತು. ಆದರೆ ಅಮೆರಿಕಕ್ಕೆ ಇಷ್ಟು ಹಣದಲ್ಲಿ ಒಂದು ಕಟ್ಟಡ ಕಟ್ಟುವುದೂ ಕಷ್ಟ' ಎಂದರು.

## ಚೀನಾ 2,00,000 ಉಪಗ್ರಹಗಳ ಉಡಾವಣೆಗೆ ಸಜ್ಜು !



ನವದೆಹಲಿ : ಬಾಹ್ಯಾಕಾಶ ಲೋಕದಲ್ಲಿ ಚೀನಾ ಮತ್ತೆ ತನ್ನ ಹಿಡಿತ ಬಿಗಿ ಮಾಡಿಕೊಳ್ಳಲು ಮುಂದಾಗಿದೆ. ದೊಡ್ಡ ಮಟ್ಟದಲ್ಲಿ ಉಪಗ್ರಹ ಉಡಾವಣೆ ಮಾಡುವ ಮೂಲಕ ಭವಿಷ್ಯದಲ್ಲಿ ಪಾಶ್ಚಿಮಾತ್ಯ ದೇಶಗಳಿಗೆ ಸೆಡ್ಡು ಹೊಡೆಯಲು ಸಜ್ಜಾಗಿದೆ. ಆದರೆ ಇದೇ ವಿಚಾರ ಈಗ ಚರ್ಚೆಗೆ ಕೂಡ ಗ್ರಾಸವಾಗಿದೆ, ಏಕೆಂದರೆ ಈಗ ಚೀನಾ ಒಂದಲ್ಲ ಎರಡಲ್ಲ ಬರೋಬ್ಬರಿ 2,00,000 ಉಪಗ್ರಹಗಳ ಉಡಾವಣೆಗೆ ಅವಕಾಶ ಕೇಳುತ್ತಿದೆ ಎಂದು ಅಂತಾರಾಷ್ಟ್ರೀಯ ಮಾಧ್ಯಮ ವರದಿ ಹೇಳಿದೆ.!

## 329 ರನ್‌ಗಳ ವಿಶ್ವ ದಾಖಲೆಯ ವಿಜಯ



ಹೈದರಬಾದ್ : ಅಂಡರ್–19 ವಿಶ್ವಕಪ್‌ನ 14ನೇ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡ ಅಮೋಘ ಜಯ ಸಾಧಿಸಿದೆ. ಅದು ಕೂಡ ಬರೋಬ್ಬರಿ 329ರನ್‌ಗಳ ಅಂತರದಿಂದ ಎಂಬುದು ವಿಶೇಷ. ನಮೀಬಿಯಾದ ಹೈ ಫರ್ಫಾಮೆನ್ಸ್ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಸೌತ್ ಆಫ್ರಿಕಾ ಹಾಗೂ ತಂಝಾನಿಯಾ ತಂಡಗಳು ಮುಖಾಮುಖಿಯಾಗಿದ್ದವು. ಈ ಮ್ಯಾಚ್‌ನಲ್ಲಿ ಟಾಸ್ ಗೆದ್ದ ತಂಝಾನಿಯಾ ತಂಡದ ನಾಯಕ ಲಕ್ಷ್ ಬಕ್ರಾನಿಯಾ ಬೌಲಿಂಗ್ ಆಯ್ದುಕೊಂಡಿದ್ದರು.

## ಭಾರತದ ವಿರುದ್ಧ ಸರಣಿ ಗೆದ್ದ ಕಿವೀಸ್



ಇಂದೋರ್: ವಿರಾಟ್ ಕೊಹ್ಲಿ, ಹರ್ಷಿತ್ ರಾಣಾ ಹೋರಾಟದ ನಡುವೆಯೂ ಭಾರತವು ನ್ಯೂಜಿಲೆಂಡ್ ವಿರುದ್ಧ 41 ರನ್‌ಗಳಿಂದ ಸೋಲು ಒಪ್ಪಿಕೊಂಡಿದೆ. ಇಂದೋರ್‌ನ ಹೋಲ್ಕರ್ ಕ್ರೀಡಾಂಗಣದಲ್ಲಿ ನಡೆದ ನ್ಯೂಜಿಲೆಂಡ್ ವಿರುದ್ಧದ ಏಕದಿನ ಸರಣಿಯ ಮೂರನೇ ಹಾಗೂ ನಿರ್ಣಾಯಕ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ದುಕೊಂಡಿತ್ತು.

## ಆಳ್ವಾಸ್ ಕ್ರೀಡಾಕೂಟದಲ್ಲಿ ಐದು ನೂತನ ಕೂಟ ದಾಖಲೆ



ಮುಡಬಿದರೆ : ಕ್ರೀಡಾಕೂಟದಲ್ಲಿ ಮದ್ರಾಸ್ ವಿಶ್ವವಿದ್ಯಾಲಯವು ಸಮಗ್ರ ಪ್ರಶಸ್ತಿ ಪಡೆದರೆ, ತಮಿಳುನಾಡಿನ ಇತರರ ವಿ.ವಿ.ಗಳೂ ಉತ್ತಮ ಸಾಧನೆ ಮಾಡಿದವು. ಆಳ್ವಾಸ್ ಶಿಕ್ಷಣ ಪ್ರತಿಷ್ಠಾನವು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ನಡೆದ ಕ್ರೀಡಾಕೂಟದಲ್ಲಿ ಐದು ನೂತನ ಕೂಟ ದಾಖಲೆಗಳಾಗಿದ್ದು, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ವತಿಯಿಂದ 25,000 ರೂಪಾಯಿ ನಗದು ಬಹುಮಾನ ನೀಡಲಾಯಿತು.

## ಎಸ್‌ಎಸ್‌ಎಲ್‌ಸಿ ಗಣಿತ ಪರೀಕ್ಷಾ ಪದ್ಧತಿಯಲ್ಲಿ ಬದಲಾವಣೆ !



ಬೆಂಗಳೂರು: ಮುಂದಿನ ಶೈಕ್ಷಣಿಕ ಸಾಲಿನಿಂದ ಎಸ್‌ಎಸ್‌ಎಲ್‌ಸಿ ಗಣಿತ ಪರೀಕ್ಷಾ ಪದ್ಧತಿಯಲ್ಲಿ ಬದಲಾವಣೆ ತರಲು ರಾಜ್ಯ ಸರ್ಕಾರ ಗಂಭೀರ ಚಿಂತನೆ ನಡೆಸುತ್ತಿದೆ. ಈ ಸಂಬಂಧ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಇಲಾಖಾ ಮಟ್ಟದಲ್ಲಿ ಸಭೆ ನಡೆಸಿ, ಬದಲಾವಣೆಯ ಸಾಧಕ–ಬಾಧಕಗಳ ಕುರಿತು ವಿವರವಾದ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದು ಶಿಕ್ಷಣ ಇಲಾಖೆ ಮೂಲಗಳು ತಿಳಿಸಿವೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳ ಪೈಕಿ ಗಣಿತ ವಿಷಯದಲ್ಲೇ ಅನುತ್ತೀರ್ಣರಾಗುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವ ಹಿನ್ನೆಲೆ, ಈ ವಿಷಯಕ್ಕೆ ಮಾತ್ರ ವಿಭಿನ್ನ ಪರೀಕ್ಷಾ ಪದ್ಧತಿ ಅಳವಡಿಸುವ ಕುರಿತು ಚರ್ಚೆ ನಡೆಯುತ್ತಿದೆ.

## ಜಿಬಿಎ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ !




ಬೆಂಗಳೂರು : ಮುಂಬರುವ ಜಿಬಿಎ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ ಬದಲು ಬ್ಯಾಲೆಟ್ ಪೇಪರ್ ಬಳಸಲಾಗುವುದು ಎಂದು ಜಿಬಿಎ ಚುನಾವಣಾ ವಿಶೇಷ ಆಯುಕ್ತರು ಮಾಹಿತಿ ನೀಡಿದ್ದಾರೆ. ಈ ಕುರಿತು ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು. ಜಿಬಿಎ ನಗರ ಪಾಲಿಕೆಗಳ ಚುನಾವಣೆಗೆ 1 ಅಕ್ಟೋಬರ್ 2025ನ್ನು ಆಧಾರವಾಗಿ ತೆಗೆದುಕೊಂಡು ಸಿದ್ಧಪಡಿಸಲಾದ ಕರಡು ಮತದಾರರ ಪಟ್ಟಿಯಲ್ಲಿ 45,69,193 ಪುರುಷರು, 43,20,583 ಮಹಿಳೆಯರು ಹಾಗೂ 1,635 ಇತರೆ ಮತದಾರರು ಸೇರಿದಂತೆ, ಒಟ್ಟು 88,91,411 ಮತದಾರರು ಇದ್ದಾರೆ ಎಂದು ವಿವರಿಸಿದರು.

## ಫೆ.13ರಿಂದ 15ರವರೆಗೆ ಹಂಪಿ ಉತವ: ಉಚಿತ ಬಸ್ ವ್ಯವಸ್ಥೆ!



ವಿಜಯನಗರ : ಈ ಬಾರಿಯ ಹಂಪಿ ಉತ್ಸವ ಫೆ.13ರಿಂದ 15ರವರೆಗೆ ಐದು ವೇದಿಕೆಗಳಲ್ಲಿ ನಡೆಯಲಿದ್ದು, ಹಲವು ಸ್ಥಳಗಳಲ್ಲಿ ಪ್ರದರ್ಶನಗಳು, ಸಾಹಸ ಕ್ರೀಡೆಗಳು ನಡೆಯಲಿದೆ. ಇದನ್ನು ನೋಡಲು ಬರುವ ಜನರಿಗೆ ಅನುಕೂಲ ಮಾಡಿಕೊಡಲು ಮೂರೂ ದಿನ ಎಲ್ಲಾ ತಾಲ್ಲೂಕುಗಳಿಂದ ಉಚಿತ ಬಸ್ ವ್ಯವಸ್ಥೆ ಕಲ್ಪಿಸುವ ಭರವಸೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಹಂಪಿ ಉತ್ಸವದ ಸಿದ್ಧತಾ ಸಭೆಯಲ್ಲಿ ಮಾತನಾಡಿ ಮಾಧ್ಯಮದವರಿಂದ ಸಲಹೆ ಕೇಳಿದರು.

## ಪರಿಶಿಷ್ಟ ಪಂಗಡದಲ್ಲಿಯೂ ಒಳಮೀಸಲಾತಿ ಜಾರಿಗೊಳಿಸಬೇಕು



ಮಂಗಳೂರು: ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ 2024ರ ಆ.1ರಂದು ಸುಪ್ರೀಂಕೋರ್ಟ್‌ನ 7 ಸದಸ್ಯರ ಸಂವಿಧಾನ ಪೀಠ ನೀಡಿದ ತೀರ್ಪು ಐತಿಹಾಸಿಕವಾಗಿದೆ. ಈ ತೀರ್ಪಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು ಸ್ಪಷ್ಟಪಡಿಸಲಾಗಿದೆ. ಈ ತೀರ್ಪು ಪ.ಜಾತಿಗಳಿಗೆ ಮಾತ್ರವಲ್ಲ ಪರಿಶಿಷ್ಟ ಪಂಗಡಗಳಿಗೂ ಸಮಾನ ವಾಗಿ ಅನ್ವಯಿಸುತ್ತದೆ. ಆದ್ದರಿಂದ ಪರಿಶಿಷ್ಟ ಪಂಗಡಗಳಲ್ಲಿಯೂ ಒಳಮೀಸಲಾತಿಯನ್ನು ತಕ್ಷಣ ಜಾರಿಗೊಳಿಸಬೇಕು ಎಂದು ಪ. ಪಂಗಡಗಳ ಒಳಮೀಸಲಾತಿ ಹೋರಾಟ ಸಮಿತಿ ಆಗ್ರಹಿಸಿದೆ.

## ಒಪಿಎಸ್ ಮರು ಜಾರಿಗೊಳ್ಳದಿದ್ದರೆ ಕರ್ನಾಟಕ ಬಂದ್ : ಷಡಕ್ಷರಿ



ದಾವಣಗೆರೆ: 'ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್) ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆ (ಒಪಿಎಸ್) ಮರು ಜಾರಿಗೊಳಿಸುವ ಬಗ್ಗೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳದಿದ್ದರೆ, ಅನಿವಾರ್ಯವಾಗಿ ರಾಜ್ಯವನ್ನು ಬಂದ್ ಮಾಡುವ ಮೂಲಕ ಹೋರಾಟ ನಡೆಸಲಾಗುವುದು' ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಎಚ್ಚರಿಕೆ ನೀಡಿದರು. ಸಾಮರ್ಥ್ಯದ ಮೇಲೆ ಸರ್ಕಾರಿ ಉದ್ಯೋಗ ದೊರೆತಿದೆ. ನನ್ನ ಜೀವ ತೆಗೆಯುವ, ಸರ್ಕಾರಿ ಉದ್ಯೋಗ ಕಸಿಯುವ ಅಧಿಕಾರ ಯಾರಿಗೂ ಇಲ್ಲ. ಯಾರ ಬೆದರಿಕೆಗಳಿಗೂ ಬಗ್ಗುವುದಿಲ್ಲ' ಎಂದು ಹೇಳಿದರು.

## ಸಿಎಲ್–7 ಲೈಸೆನ್ಸ್ ಮಂಜೂರಿನಲ್ಲಿ ಲಂಚಾವತಾರ



ಬೆಂಗಳೂರು – ಅಬಕಾರಿ ಇಲಾಖೆಯಲ್ಲಿ ಸಿಎಲ್–7 ಲೈಸೆನ್ಸ್ ಮಂಜೂರು ಮಾಡಲು ಸಚಿವ ಆರ್.ವಿ.ತಿಮಾಪುರ ಹಾಗೂ ಅವರ ಪುತ್ರ ಮತ್ತು ಅಧಿಕಾರಿಗಳು ಲಂಚಕ್ಕೆ ಬೇಡಿಕೆ ಇಟ್ಟಿರುವ ಸ್ಫೋಟಕ ಆಡಿಯೋವನ್ನು ಬಿಜೆಪಿ ಬಿಡುಗಡೆ ಮಾಡಿದೆ. ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮುಖ್ಯ ಸಚೇತಕ ಎಂ.ರವಿಕುಮಾರ್ ಅವರು ಪಕ್ಷದ ಕಚೇರಿಯಲ್ಲಿ ಅಬಕಾರಿ ಸಚಿವ ಆರ್.ವಿ.ತಿಮಾಪುರ ಪರವಾಗಿ ಜಿಲ್ಲಾಧಿಕಾರಿಗಳು ಮಧ್ಯವರ್ತಿಗಳಿಂದ ಲಂಚ ಕೇಳಿದ್ದಾರೆ ಎನ್ನಲಾದ ಆಡಿಯೋ ಸಂಭಾಷಣೆಯನ್ನು ಬಿಡುಗಡೆ ಮಾಡಿದರು.

## ವಂದೇ ಮಾತರಂ ಥೀಮ್‌ನಲ್ಲಿ ಗಣರಾಜ್ಯೋತ್ಸವ




ನವದೆಹಲಿ: ರಾಷ್ಟ್ರೀಯ ಗೀತೆ 'ವಂದೇ ಮಾತರಂ'ಗೆ 150 ವರ್ಷಗಳು ಪೂರ್ಣವಾಗಿರುವ ಹಿನ್ನೆಲೆಯಲ್ಲಿ ಈ ವರ್ಷದ ಗಣರಾಜ್ಯ ದಿನವನ್ನು ಇದೇ ಥೀಮ್‌ನಲ್ಲಿ ರೂಪಿಸಲಾಗಿದೆ. ಕರ್ತವ್ಯ ಪಥದುದ್ದಕ್ಕೂ ಗೀತೆಯ ಆರಂಭಿಕ ಚರಣಗಳನ್ನು ವಿವರಿಸುವ ವರ್ಣಚಿತ್ರ ಪ್ರದರ್ಶಿಸಲಾಗುತ್ತದೆ. ಕವಿ ಬಂಕಿಮ ಚಂದ್ರ ಚಟರ್ಜಿಯವರಿಗೆ ಗೌರವ ಸಲ್ಲಿಸುವಂತೆ ಮುಖ್ಯ ವೇದಿಕೆಯನ್ನು ಅಲಂಕರಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರೇಡ್ ಸ್ಥಳದ ಸುತ್ತಲಿನ ಆವರಣದಲ್ಲಿ ಈ ಹಿಂದಿನಂತೆ 'ವಿವಿಐಪಿ' ಮತ್ತು ಇತರ ಲೇಬಲ್‌ಗಳನ್ನು ಬಳಸಲಾಗುವುದಿಲ್ಲ. ಬದಲಾಗಿ, ಭಾರತೀಯ ನದಿಗಳ ಹೆಸರಿಡಲಾಗಿದೆ.

## ಚಾಬಹಾರ್ ಬಂದರಿನ ಹಿಡಿತ ಬಲಗೊಳಿಸಲು ಭಾರತ ಹೊಸ ತಂತ್ರ



ಮುಂಬೈ : ಇರಾನ್‌ನ ಚಾಬಹಾರ್ ಬಂದರಿನ ಮೇಲೆ ಭಾರತ ಹಿಡಿತ ಹೊಂದಿದ್ದು, ಚಾಬಹಾರ್ ಕಾರ್ಯಾಚರಣೆ ಮೇಲಿನ ಅಮೆರಿಕದ ನಿರ್ಬಂಧಗಳ ವಿನಾಯಿತಿ ಅವಧಿ ಮುಗಿಯುತ್ತಿದೆ. ಹೀಗಿದ್ದಾಗ ಭಾರತ ಹೊಸದಾದ ಉಪಾಯ ಮಾಡಿದ್ದು, ವಾಷಿಂಗ್ಟನ್ ಜೊತೆಗೆ ಇದೇ ವಿಚಾರವಾಗಿ ಸಾಲು ಸಾಲು ಚರ್ಚೆ ನಡೆಸುತ್ತಿದೆ. ಈ ಮೂಲಕ ಚಾಬಹಾರ್ ಬಂದರಿನ ಮೇಲಿರುವ ಹಿಡಿತವನ್ನು ಉಳಿಸಿಕೊಳ್ಳಲು ಹೊಸ ಕಾರ್ಯತಂತ್ರ ರೂಪಿಸಲಾಗುತ್ತಿದೆ. ಬಂದರಲ್ಲಿ ಭಾರತದ ದೀರ್ಘಕಾಲೀನ ಹಿತಾಸಕ್ತಿ ಕಾಪಾಡುವ ಜೊತೆಗೆ ಅಮೆರಿಕದ ಕಳವಳ ಪರಿಹರಿಸಲು ಭಾರತ ಮುಂದಾಗಿದೆ.

## ಪುರುಷರಿಗೂ ಉಚಿತ ಬಸ್ ಸೇವೆ ವಿಸ್ತರಣೆ : ಎಐಡಿಎಂಕೆ



ಚೆನ್ನೈ – ಮುಂಬರುವ ರಾಜ್ಯ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಎಐಎಡಿಎಂಕೆ ಪಕ್ಷವು ಬರಪೂರ ಕೊಡುಗೆಗಳನ್ನು ಘೋಷಣೆ ಮಾಡಿದೆ. ಎಐಡಿಎಂಕೆ ಅಧಿಕಾರಕ್ಕೆ ಬಂದರೆ, ಮಹಿಳೆಯರಿಗೆ ಮಾಸಿಕ 2 ಸಾವಿರ ರೂ., ಮಹಿಳೆಯರ ಜೊತೆ ಪುರುಷರಿಗೂ ಉಚಿತ ಬಸ್ ಸೇವೆ ವಿಸ್ತರಣೆ ಮಾಡುವುದಾಗಿ ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಪಳನಿಸ್ವಾಮಿ ಘೋಷಿಸಿದ್ದಾರೆ. ಇಷ್ಟೇ ಅಲ್ಲದೇ ಪ್ರತಿಯೊಬ್ಬರಿಗೂ ಸೂರು ಕಲ್ಪಿಸಲಾಗುವುದು. ಇದರೊಟ್ಟಿಗೆ ಪಕ್ಷವು ಸಾಮಾಜಿಕ ನ್ಯಾಯದ ಪರವಾಗಿ ಹೋರಾಡಲಿದ್ದು, ಜನರ ಕಲ್ಯಾಣಕ್ಕಾಗಿ ಕೆಲ ಕೊಡುಗೆಗಳನ್ನು ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಸಾಂಬಾ ವಲಯದಲ್ಲಿ ಪಾಕಿಸ್ತಾನದ ಡ್ರೋನ್..!



ನವದೆಹಲಿ : ಗಡಿಯಲ್ಲಿ ಪಾಕಿಸ್ತಾನ ತನ್ನ ಕುತಂತ್ರವನ್ನು ಮುಂದುವರಿಸಿದ್ದು, ಅಂತರಾಷ್ಟ್ರೀಯ ಗಡಿಯ ಸಮೀಪವಿರುವ ಸಾಂಬಾ ವಲಯದಲ್ಲಿ ಪಾಕಿಸ್ತಾನದ ಡ್ರೋನ್ ಕಾಣಿಸಿಕೊಂಡಿದೆ ಎಂದು ವರದಿಯಾಗಿದೆ. ಸುಮಾರು ಐದು ನಿಮಿಷಗಳ ಕಾಲ ಭಾರತೀಯ ಗಡಿ ಪ್ರದೇಶದಲ್ಲಿ ಹಾರಾಡುತ್ತಿದ್ದ ಈ ಡ್ರೋನ್, ಭದ್ರತಾ ಪಡೆಗಳ ಕಣ್ಗಾವಲಿಗೆ ಸಿಕ್ಕಿಬಿದ್ದಿದೆ. ತಕ್ಷಣವೇ ಎಚ್ಚೆತ್ತ ಭಾರತೀಯ ಸೈನಿಕರು ಪ್ರತಿದಾಳಿ ನಡೆಸಲು ಸಜ್ಜಾಗುತ್ತಿದ್ದಂತೆಯೇ, ಡ್ರೋನ್ ವಾಪಸ್ ಪಾಕಿಸ್ತಾನದ ಕಡೆಗೆ ಹಾರಿದೆ. ಗಡಿಯಲ್ಲಿ ಪಾಕಿಸ್ತಾನದ ಪ್ರಚೋದನಾಕಾರಿ ಚಟುವಟಿಕೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ.

## ಬಿಜೆಪಿಯಿಂದ ಕಲಿಯುವುದು ಬಹಳಷ್ಟಿದೆ –ಅಖಿಲೇಶ್ ಯಾದವ್



ಭುವನೇಶ್ವರ್: ಲಾತೂರ್ ಪುರಸಭೆ ಹೊರತುಪಡಿಸಿ ಮುಂಬೈ ಮಹಾನಗರ ಪಾಲಿಕೆ ಸೇರಿ ಮಹಾರಾಷ್ಟ್ರದ 27 ಪುರಸಭೆಗಳಲ್ಲಿ ಭರ್ಜರಿ ಗೆಲುವು ದಾಖಲಿಸಿರುವ ಬಿಜೆಪಿ ಗೆಲುವಿನ ತಂತ್ರದ ಬಗ್ಗೆ ಪ್ರತಿಕ್ರಿಯಿಸಿರುವ ಉತ್ತರ ಪ್ರದೇಶ ಮಾಜಿ ಸಿಎಂ & ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್, ಬಿಜೆಪಿಯಿಂದ ಕಲಿಯುವುದು ಬಹಳಷ್ಟಿದೆ ಎಂದು ಹೇಳಿದ್ದಾರೆ. ಬಿಜೆಪಿ ಪಕ್ಷವು ಅತ್ಯಂತ ವೃತ್ತಿಪರ ರೀತಿಯಲ್ಲಿ ನಡೆಸಲ್ಪಡುತ್ತಿದೆ. ದತ್ತಾಂಶ ಆಧಾರಿತ ತಂತ್ರಗಳು ಮತ್ತು ಅಪಾರ ಸಂಪನ್ಮೂಲಗಳಿಂದ ಕೂಡಿದೆ. ಅದನ್ನು ಸೋಲಿಸಲು ಬಯಸುವವರು ಅದೇ ರೀತಿಯಲ್ಲಿ ತಯಾರಿ ನಡೆಸಬೇಕಾಗುತ್ತದೆ ಎಂದು ಪ್ರತಿಪಾದಿಸಿದ್ದಾರೆ.

## ಭಾರತದ ಏಳಿಗೆಗೆ ಸ್ಥಳಿಯ ನಾಯಕತ್ವದ ಕೊರತೆಯಿದೆ



ಮಧ್ಯಪ್ರದೇಶ: ಭಾರತದ ಏಳಿಗೆಗೆ ಹಣಕಾಸಿನ ತೊಂದರೆ ಇಲ್ಲ, ಆದರೆ ಹಳ್ಳಿಗಳಲ್ಲಿರುವ ಬಡವರು, ರೈತರನ್ನು ಪ್ರತಿನಿಧಿಸುವ ಬದ್ಧ ನಾಯಕತ್ವದ ಕೊರತೆಯಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅಭಿಪ್ರಾಯ ಪಟ್ಟಿದ್ದಾರೆ. ಮಧ್ಯಪ್ರದೇಶದ ವಿದಿಶಾದಲ್ಲಿ ಮುಖ್ಯಮಂತ್ರಿ ಮೋಹನ್ ಯಾದವ್ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರೊಂದಿಗೆ ನಡೆದ ಕಾರ್ಯಕ್ರಮವೊಂದರಲ್ಲಿ ಅವರು ಮಾತನಾಡಿದರು. ಭಾರತದಲ್ಲಿರುವ ಸಂಪನ್ಮೂಲಗಳು ಮಹಾಭಾರತದಲ್ಲಿನ ಅಕ್ಷಯ ಪಾತ್ರೆಯಂತೆ, ತೆಗೆದಷ್ಟು ಇನ್ನು ಹೆಚ್ಚು ಹುಟ್ಟುತ್ತಲೇ ಇರುತ್ತದೆ ಎಂದರು.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಕೇವಲ 99 ರೂ.ಗೆ ಮಲ್ಟಿಪ್ಲೆಕ್ಸ್‌ನಲ್ಲಿ ನಾನ್‌ವೆಜ್!



ಜಯಕಿರಣ ಫಿಲಂಸ್ ಲಾಂಛನದಲ್ಲಿ, ಪ್ರಕಾಶ್ ಪಾಂಡೇಶ್ವರ್ ನಿರ್ಮಾಣದಲ್ಲಿ ಹಾಗೂ ಕೆ. ಸೂರಜ್ ಶೆಟ್ಟಿ ನಿರ್ದೇಶನದಲ್ಲಿ ಅದ್ಭುತವಾಗಿ ಸಿದ್ಧಗೊಂಡಿರುವ "ನಾನ್ ವೆಜ್' ತುಳು ಸಿನಿಮಾ ಫೆಬ್ರವರಿ 6ರಂದು ಕರಾವಳಿ ಜಿಲ್ಲೆಯಾದ್ಯಂತ ತೆರೆಕಾಣಲಿದೆ. ಇದರಲ್ಲೊಂದು ಅತ್ಯಂತ ಸಂತೋಷದ ಸಂಗತಿ ಎಂದರೆ, ಈ ಸಿನಿಮಾವನ್ನು ಎಲ್ಲ ಮಲ್ಟಿಪ್ಲೆಕ್ಸ್‌ನಲ್ಲೂ ಕೇವಲ 99 ರೂ.ಗೆ ನೋಡಬಹುದಾಗಿದೆ. ದುಬಾರಿ ಟಿಕೆಟ್ ಕೊಟ್ಟು ಸಿನಿಮಾ ನೋಡಲು ಸಾಧ್ಯವಾಗದವರು ಇಂಥದ್ದೊಂದು ಸುಂದರ ಹಾಗೂ ಅತ್ಯುತ್ತಮ ಸಿನಿಮಾವನ್ನು ನೋಡದೆ ಇರಬಾರದು ಎಂದು ಚಿತ್ರದ ನಿರ್ಮಾಪಕರು ಕೇವಲ 99 ರೂ. ಟಿಕೆಟ್ ನಿಗದಿಪಡಿಸಿದ್ದು, ಇದು ತುಳು ಚಿತ್ರರಂಗದಲ್ಲಿ ಒಂದು ಹೊಸ ಸಂಚಲನ ಉಂಟು ಮಾಡಿದೆ. ಸಿಂಗಲ್ ಥಿಯೇಟರ್‌ಗಿಂತಲೂ ಕಡಿಮೆ ದರದಲ್ಲಿ ಈ ಸಿನಿಮಾವನ್ನು ಮಲ್ಟಿಪ್ಲೆಕ್ಸ್‌ಗಳಲ್ಲಿ ನೋಡಲು ಅವಕಾಶ ಕಲ್ಪಿಸಲಾಗಿದೆ.

## ಸುದೀಪ್ ಶಿಷ್ಯನ ಸಿನಿಮಾ.. ಪ್ರಿಯಾಂಕಾ ನಾಯಕಿ..



'ಏಳುಮಲೆ' ಸಿನಿಮಾ ಮೂಲಕ ಕನ್ನಡ ಸಿನಿಮಾ ಪ್ರೇಮಿಗಳಿಗೆ ಪರಿಚಿತರಾಗಿದವರು ನಟಿ ಪ್ರಿಯಾಂಕಾ ಆಚಾರ್. ಚೊಚ್ಚಲ ಚಿತ್ರದಲ್ಲಿಯೇ ತಮ್ಮನ್ನು ತಾವು ನಾಯಕಿಯಾಗಿ ನಿರೂಪಿಸಿಕೊಂಡಿರುವ ಪ್ರಿಯಾಂಕ ಆಚಾರ್ ಇದೀಗ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ಮೂಲತಃ ಮೈಸೂರಿನವರಾದ ಪ್ರಿಯಾಂಕಾ ಆಚಾರ್, ಚಿಕ್ಕಂದಿನಿಂದಲೇ ನಟಿಯಾಗಬೇಕೆಂದು ಬಯಸಿದ್ದರು. ಅದಕ್ಕಾಗಿ ಪ್ರಿಯಾಂಕಾ ಸಾಕಷ್ಟು ಸೀರಿಯಲ್ ಮತ್ತು ಸಿನಿಮಾಗಳಿಗೆ ಆಡಿಷನ್ ನೀಡಿದ್ದರು. ಜೀ ಕನ್ನಡ ವಾಹಿನಿಯ 'ಮಹಾನಟಿ' ರಿಯಾಲಿಟಿ ಶೋಗೆ ವಿನ್ನರ್ ಆಗಿ ಹೊರ ಹೊಮ್ಮಿದ ಪ್ರಿಯಾಂಕಾ, ತರುಣ್ ಸುಧೀರ್ ನಿರ್ಮಾಣದ ಏಳುಮಲೆ ಸಿನಿಮಾ ಮೂಲಕ ನಾಯಕಿಯಾಗಿ ಬಣ್ಣ ಹಚ್ಚಿದರು. ತಮ್ಮ ಮುಗ್ಧ ಚೆಲುವು, ನಟನೆಯಿಂದ ಗಮನ ಸೆಳೆದ ಅವರು ಅಭಿನಯ ಚಕ್ರವರ್ತಿ ಕಿಚ್ಚನ ಆಪ್ತ ಬರಹದಲ್ಲಿ ಗುರುತಿಸಿಕೊಂಡಿರುವ ಕಿರಣ್ ವಿಶ್ವನಾಥ್ ನಿರ್ದೇಶನದ ಚಿತ್ರದಲ್ಲಿ ನಟಿಸುತ್ತಿದ್ದಾರೆ.

## ಲಂಬೋದರ 2.0 ನಿರ್ದೇಶಿಸಲಿರುವ ಸಿಂಪಲ್ ಸುನಿ

ಹೆಸರಾದಂತ ಚಲನಚಿತ್ರ ನಿರ್ದೇಶಕ ಸಿಂಪಲ್ ಸುನಿ ಅವರು ಎಐ ಸಾಮಾಜಿಕ ಥ್ರಿಲ್ಲರ್ 'ಲಂಬೋದರ 2.0' ಚಿತ್ರಕ್ಕೆ ನಿರ್ದೇಶನ ಮಾಡಲು ಸಜ್ಜಾಗಿದ್ದಾರೆ. ಈ ಚಿತ್ರದ ಮೂಲಕ ಅನಿಲ್ ಶೆಟ್ಟಿ ನಾಯಕ ನಟನಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ. ಬಾಲಿವುಡ್ ನಟಿ ಸಾಚಿ ಬಿಂದ್ರಾ ಸ್ಯಾಂಡಲವುಡ್‌ಗೆ ಎಂಟ್ರಿ ಕೊಡುತ್ತಿದ್ದಾರೆ. ಮಾಸ್ ಪ್ರೊಡಕ್ಷನ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಲಂಬೋದರ 2.0 ಚಿತ್ರವು ಕೃತಕ ಬುದ್ಧಿಮತ್ತೆ (ಎಐ), ಯುವಜನತೆ ಮತ್ತು ವೇಗವಾಗಿ ರೂಪಾಂತರಗೊಳ್ಳುತ್ತಿರುವ ಡಿಜಿಟಲ್ ಪರಿಸರದಂತಹ ಸಮಕಾಲೀನ ವಿಷಯಗಳನ್ನು ಅನ್ವೇಷಿಸುತ್ತದೆ. ಇಂದಿನ ಡಿಜಿಟಲ್ ಸಂಪರ್ಕಿತ ತಲೆಮಾರಿಗೆ ಸ್ಪಂದಿಸುವಂತೆ, ಸಾಮಾಜಿಕವಾಗಿ ಪ್ರಸ್ತುತವಾಗಿರುವ ಹೈ–ಕಾನ್ಸೆಪ್ಟ್ ಥ್ರಿಲ್ಲರಾಗಿ ಈ ಚಿತ್ರವನ್ನು ರೂಪಿಸಲಾಗಿದೆ. ಚಿತ್ರದ ಮುಹೂರ್ತ ಸಮಾರಂಭವು ಇತ್ತೀಚೆಗೆ ನೆರವೇರಿದೆ.



## ತಿಕ್ಲು ರಾಮ ಶೀರ್ಷಿಕೆ ಮತ್ತು ಪೋಸ್ಟರ್ ಬಿಡುಗಡೆ

ಹೆಸರಿನಲ್ಲೆ ನಗು ತರಿಸುವ 'ತಿಕ್ಲು ರಾಮ' ಚಿತ್ರದ ಶೀರ್ಷಿಕೆ ಮತ್ತು ಪೋಸ್ಟರ್‌ನ್ನು ಆ ದಿನಗಳು ಚೇತನ್ ಸಂಕ್ರಾಂತಿ ಹಬ್ಬದ ಶುಭ ದಿನದಂದು ಎಂಎಂಬಿ ಲೆಗಸಿದಲ್ಲಿ ತುಂಬಿದ ಆಹ್ವಾನಿತರ ಮುಂದೆ ಅನಾವರಣಗೊಳಿಸಿದರು. ಕರಿಷ್ಮಾ–ಶ್ರಾವ್ಯ ಕಂಬೈನ್ಸ್ ಬ್ಯಾನರ್ ಅಡಿಯಲ್ಲಿ ಶೃತಿ.ಜಿ.ಬಿ ಮತ್ತು ಕೋಮಲ ನಟರಾಜು ಜಂಟಿಯಾಗಿ ನಿರ್ಮಾಣ ಮಾಡುತ್ತಿದ್ದಾರೆ. ಮಂಜುಕವಿ ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ. 'ಇದೇ ಕಾಡಿನಲ್ಲಿ ನಾನು ನಿನ್ನ ಉಸಿರು ನಿಲ್ಲಿಸದೆ ಹೋದರೆ ನನ್ನ ಹೆಸರು ಅಂತ ಗರ್ಜಿಸುತ್ತಾ ನಗುವ ಸುಚೇಂದ್ರ ಪ್ರಸಾದ್ ಹಿನ್ನಲೆ ಧ್ವನಿಯ ಒಂದು ನಿಮಿಷದ ಟೈಟಲ್ ಟೀಸರ್ ಗಮನ ಸೆಳೆಯಿತು. ಇದೇ ಸಂದರ್ಭದಲ್ಲಿ ಡಾ. ರಾಜ್‌ಕುಮಾರ್ ಮೊಮ್ಮಗ ಷಣ್ಮುಗ ಗೋವಿಂದರಾಜ್, ನಿರ್ಮಾಪಕ ಸಿ. ಎಸ್. ವೆಂಕಟೇಶ್ ಉಪಸ್ಥಿತರಿದ್ದರು.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021